# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **824** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರವು ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಎಷ್ಟು ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು) | ಸರ್ಕಾರದ ಮಾನದಂಡಗಳ ವಿರುದ್ಧವಾಗಿ ಪಡಿತರ ಚೀಟಿ ಪಡೆದವರ ಮಾಹಿತಿಯನ್ನು ಕುಟುಂಬ ತಂತ್ರಾಂಶದಿಂದ ಪಡೆದಿದ್ದು, ಆದಾಯ ತೆರಿಗೆ ಪಾವತಿದಾರರು, ವಾರ್ಷಿಕ ರೂ.1.20 ಲಕ್ಷಕ್ಕಿಂತ ಹೆಚ್ಚಿರುವ ಫಲಾನುಭವಿಗಳು, ಸರ್ಕಾರಿ ನೌಕರರು, ಮೃತ ಫಲಾನುಭವಿಗಳು, ಮತ್ತು 06 ತಿಂಗಳಿನಿಂದ ಪಡಿತರವನ್ನು ಪಡೆಯದೇ ಇರುವ ಆದ್ಯತಾ ಪಡಿತರ ಚೀಟಿದಾರರ ಮಾಹಿತಿಯನ್ನು ಪಡೆಯಲಾಗಿರುತ್ತದೆ. ಇದರಲ್ಲಿ ಮೃತ ಫಲಾನುಭವಿಗಳನ್ನು ತಂತ್ರಾಂಶದಿಂದ ರದ್ದುಪಡಿಸಲಾಗಿದ್ದು, ಉಳಿದ ಫಲಾನುಭವಿಗಳನ್ನು ಅಮಾನತ್ತು/ ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿತ್ತು. ದಿನಾಂಕ:22.11.2024ರ ಪತ್ರದನ್ವಯ ಸರ್ಕಾರಿ ನೌಕರರು ಹಾಗೂ ಆದಾಯ ತೆರಿಗೆ ಪಾವತಿದಾರರನ್ನು ಹೊರತುಪಡಿಸಿ ಉಳಿದ ಎಲ್ಲಾ ಪಡಿತರ ಚೀಟಿಗಳನ್ನು ಆದ್ಯತಾ ಪಡಿತರ ಚೀಟಿಗಳ್ಳಾನ್ನಾಗಿ ಮರು ಸ್ಥಾಪಿಸಲಾಗಿರುತ್ತದೆ.<br>ಜುಲೈ-2024ರ ಮಾಹೆಯಿಂದ ಯಾವುದೇ ಆದ್ಯತಾ ಪಡಿತರ ಚೀಟಿಯನ್ನು ರದ್ದುಪಡಿಸಿರುವುದಿಲ್ಲ. |
| ಆ | ಈ ಬಿ.ಪಿ.ಎಲ್ ಕಾರ್ಡುದಾರರನ್ನು ರದ್ದುಪಡಿಸಿ ಮಾರ್ಪಡಿಸಲು ಸರ್ಕಾರ ರೂಪಿಸಿರುವ ನಿಯಮಗಳೇನು; ಇದರಿಂದ ಬಡವರ್ಗದವರು ಉಪಯೋಗಿಸುತ್ತಿರುವ ಬಿಪಿಎಲ್ ಕಾರ್ಡ್‌ದಾರರು ತುಂಬಾ ಸಂಕಷ್ಟ ಅನುಭವಿಸುತ್ತಿದ್ದು ರದ್ದುಮಾಡಿದ ಬಿಪಿಎಲ್ ಕಾರ್ಡ್‌ದಾರರಿಗೆ ಮರು ಬಿಪಿಎಲ್ ಕಾರ್ಡ್‌ಗಳನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | |

**ಆನಾಸ 395 ಡಿಆರ್‌ಎ 2024 (ಇ-ಆಫೀಸ್)**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು